ಇ) ಇಂತಹ ಶರಾಬು ಅಂಗಡಿಗಳನ್ನು ನಿಲ್ಲಿಸಲು ಸರ್ಕಾರವು ತೆಗೆದುಕೊಳ್ಳುವ ಕ್ರಮವೇನು?

ಶ್ರೀ ಜಯವಂತ ಸುಬ್ರಾಯ (ಅಬಕಾರಿ ರಾಜ್ಯ ಸಚಿವರು) :

ಅ) 530 ಅಂಗಡಿಗಳು.

ಆ) ಹೌದು

ಇ) 12 ಪ್ರಕರಣಗಳಲ್ಲಿ ದೂರುಗಳು ಬಂದಿದೆ. ಈ ಎಲ್ಲಾ 12 ಅನಧಿಕೃತ ಶರಾಬು ಅಂಗಡಿಗಳನ್ನು ಮುಚ್ಚಿಸಲಾಗಿದೆ.

ರಾಜ್ಯದಲ್ಲಿ ವಿದ್ಯುತ್ ಅವ್ಯವಸ್ಥೆ ಸರಿಪಡಿಸುವುದು.

700 (456) ಶ್ರೀ ಎ.ರುಕ್ಕಯ್ಯ ಪೂಜಾರಿ (ವಿಟ್ಲ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ 1998-99ನೇ ಸಾಲಿನಲ್ಲಿ ಅಕ್ರಮ ಸಕ್ರಮದಲ್ಲಿ ಎಷ್ಟು ಪಂಪುಸೆಟ್‌ಗಳಿಗೆ ವಿದ್ಯುತ್ ಒದಗಿಸಲಾಗಿದೆ.

ಆ) ಇದರಿಂದ ವಿದ್ಯುತ್ ಅವ್ಯವಸ್ಥೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದರೆ, ಸರಿಪಡಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಶರಣಬಸಪ್ಪ ದರ್ಶನಾಪುರ (ಇಂಧನ ರಾಜ್ಯ ಸಚಿವರು) :

ಅ) ರಾಜ್ಯದಲ್ಲಿ 1998-99ನೇ ಸಾಲಿನಲ್ಲಿ ಫೆಬ್ರವರಿ 99ರ ಅಂತ್ಯದವರೆಗೆ ಒಟ್ಟು 14489 ಅನಧಿಕೃತ ನೀರಾವರಿ ಪಂಪುಸೆಟ್ಟುಗಳನ್ನು ಸಕ್ರಮಗೊಳಿಸಲಾಗಿದೆ.

ಆ) ಹೌದು, ಬಂದಿದೆ ಇದನ್ನು ಸರಿಪಡಿಸಲು ವಿದ್ಯುತ್‌ಮಾರ್ಗಗಳ ಬಲವರ್ಧನೆ, ಹೆಚ್ಚುವರಿ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸುವುದು ಇತ್ಯಾದಿ ಕ್ರಮಗಳನ್ನು ತೆಗೆದುಕೊಂಡಿರುತ್ತದೆ.

ಬೆಂಗಳೂರು ನಗರದಲ್ಲಿ ಬೋರ್‌ವೆಲ್‌ಗಳನ್ನು ಕೊರೆದಿರುವುದು.

703 (1090) ಶ್ರೀ.ಎಸ್.ರಾಜಣ್ಣ(ಭಾರತೀನಗರ) : ಮಾನ್ಯ ಬೆಂಗಳೂರು ನಗರಾಭಿವೃದ್ಧಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1. ಬೆಂಗಳೂರು ನಗರದಲ್ಲಿ 1996ರ ಜನವರಿಯಿಂದ ಫೆಬ್ರವರಿ 1999ರ ವರೆಗೆ ಕೊರೆದಿರುವ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು? (ವಿಧಾನ ಸಭಾ ಕ್ಷೇತ್ರವಾರು)

2. ಈ ಬಗ್ಗೆ ಸರ್ಕಾರ ಖರ್ಚು ಮಾಡಿದ ಹಣವೆಷ್ಟು?

3. ಈ ಪೈಕಿ ಕೆಟ್ಟಿರುವ ಕೊಳವೆ ಬಾವಿಗಳೆಷ್ಟು? ಅವುಗಳನ್ನು ರಿಪೇರಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು?

4. ಭಾರತಿ ನಗರ ವಿಧಾನ ಸಭಾ ಕ್ಷೇತ್ರದಲ್ಲಿ ಯಾವ ಯಾವ ಸ್ಥಳದಲ್ಲಿ ಕೊಳವೆ ಬಾವಿಗಳಿವೆ? ಅವುಗಳಲ್ಲಿ ಎಷ್ಟು ಕೆಲಸ ಮಾಡುತ್ತಿವೆ?